# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1275 (1391)
ಸದಸ್ಯರ ಹೆಸರು : ಶ್ರೀ ಕೆ ವಿವೇಕಾನಂದ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ-ಕಾಲೇಜುಗಳ ಭೋದಕ-ಭೋದಕೇತರ ಸಿಬ್ಬಂದಿಗಳಿಗೆ ಸರ್ಕಾರದಿಂದ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ; | ಇಲ್ಲ.<br>ಅನುದಾನಿತ ಶಾಲಾ ಶಿಕ್ಷಕರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ-1983 ರ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಿಬ್ಬಂದಿ ನೇಮಕಾತಿ, ಸೇವಾ ಷರತ್ತು ನಿಯಮಗಳು 1999 ರ ಅನೆಕ್ಷರ್-2 ರ ಷರತ್ತು [3] ರಲ್ಲಿ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. |
| ಆ) | ಈ ಅನುದಾನಿತ ಶಾಲಾ ಕಾಲೇಜುಗಳ ಭೋದಕ-ಭೋದಕೇತರ ಸಿಬ್ಬಂದಿಗಳಿಗೆ ಸರ್ಕಾರಿ ನೌಕರರಿಗೆ ನೀಡುತ್ತಿರುವ ರೀತಿಯಲ್ಲಿ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಸದರಿ ನೌಕರರ ಆರೋಗ್ಯದ ಹಿತದೃಷ್ಟಿಯಿಂದ ತುರ್ತಾಗಿ ಜಾರಿ ಮಾಡಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ? (ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದು ರಹಿತ ಚಿಕಿತ್ಸೆಗಳನ್ನು ಒದಗಿಸಲು ರಾಜ್ಯ ಸರ್ಕಾರದಿಂದ ರೂಪಿಸಲಾಗಿರುವ **"ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ"** (KASS) ಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ:23-09-2025ರ ಆದೇಶದ ಮೂಲಕ ಅಕ್ಟೋಬರ್-01 2025 ರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ. ಈ ಯೋಜನೆಯನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ವಿಸ್ತರಿಸಲಾಗಿರುವುದಿಲ್ಲ. |

**ಸಂಖ್ಯೆ:ಇಪಿ 85 ಎಸ್‌ಇಎಸ್ 2026**

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.